C. NO. 19494

# ಕರ್ನಾಟಕ ಅರಣ್ಯ ಇಲಾಖೆ

ಸಂಖ್ಯೆ:ಪ್ರಮುಅಸಂ(ಹೆಚ್‌ಓಎಫ್‌ಎಫ್)/ಸಾಂಖ್ಯಿಕ/ಜಾಹೀರಾತು–04/2017–18

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)ಯವರ ಕಛೇರಿ,
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು, ದಿನಾಂಕ: 06–05–2017.

**ಇವರಿಗೆ,**

**ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,**
ಐ.ಸಿ.ಟಿ./ಮೌಲ್ಯಮಾಪನ/ ಆನೆಯೋಜನೆ, ಮೈಸೂರು.

(18)

**ವಿಷಯ:** ಅಪಜೀ ಇಲಾಖೆಯಿಂದ ಹೊರಡಿಸುವ ಎಲ್ಲಾ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರ ಪತ್ರ ಸಂಖ್ಯೆ: ಅಪಜೀ 60 ಸಿಆರ್‌ಎಸ್ 2017

◊◊◊

10/5

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಮತ್ತು ಅದರ ಅಡಕಗಳನ್ನು ಇದರೊಂದಿಗೆ ಲಗತ್ತಿಸುತ್ತಾ, ಅರಣ್ಯ ಇಲಾಖೆಯಿಂದ ಹೊರಡಿಸುವ ಎಲ್ಲಾ ಜಾಹೀರಾತುಗಳಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವಂತೆ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಲಾಗಿದೆ.

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
**(ಮುಖ್ಯಸ್ಥರು, ಅರಣ್ಯಪಡೆ)**

website

com- 19961

# ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 60 ಸಿಆರ್‌ಎಸ್ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02.05.2017

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ,
ಕರ್ನಾಟಕ ಸರ್ಕಾರ,
ಬೆಂಗಳೂರು-560001.

ಇವರಿಗೆ:
1) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,(ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.
2) ಸದಸ್ಯ ಕಾರ್ಯದರ್ಶಿ, ಕರ್ನಾಟಕ ಮೃಗಾಲಯ ಪ್ರಾಧಿಕಾರ, ಮೈಸೂರು
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕೆಗಳ ನಿಗಮ ನಿಯಮಿತ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560003.
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅರಣ್ಯ ನಿಗಮ ನಿಯಮಿತ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560003.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ ಅಬ್ಬಕ್ಕ ನಗರ, 1ನೇ ಮುಖ್ಯ ರಸ್ತೆ, ಕೊಟ್ಟಾರ, ಮಂಗಳೂರು-575006.

ಮಾನ್ಯರೆ,

APCCF (CB)

**ವಿಷಯ:** ಅಪಜೀ ಇಲಾಖೆಯಿಂದ ಹೊರಡಿಸುವ ಎಲ್ಲಾ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:** ಪತ್ರ ಸಂಖ್ಯೆ:ವಾಇ:ಸುಮಪ:ವಿಪ್ರಪ:2014-15/8688-733, ದಿನಾಂಕ:31.03.2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಮತ್ತು ಅದರ ಅಡಕಗಳನ್ನು ಇದರೊಂದಿಗೆ ಲಗತ್ತಿಸಿದೆ. ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯಿಂದ ಹೊರಡಿಸುವ ಎಲ್ಲಾ ಜಾಹೀರಾತುಗಳಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವಂತೆ ಹಾಗೂ ತಮ್ಮ ಅಧೀನದಲ್ಲಿರುವ ಎಲ್ಲಾ ಕಚೇರಿಗಳ ಗಮನಕ್ಕೆ ತರುವಂತೆ ತಿಳಿಸಲು ನಾನು ನಿರ್ದೇಶಿತಳಾಗಿದ್ದೇನೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ
(ಮುಖ್ಯಸ್ಥರು ಅರಣ್ಯಪಡೆ) ಕರ್ನಾಟಕ, ಬೆಂಗಳೂರು
- 5 MAY 2017
ಸಂಖ್ಯೆ ..........

ತಮ್ಮ ವಿಶ್ವಾಸಿ,

02/5/17
(ಎಲ್. ಶಾರದ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
(ಅರಣ್ಯ-ಸಿ ಮತ್ತು ಸಮನ್ವಯ).

ADS. 6/5/17

5018
1/4/2017

ನೋಂದಾಯಿಸಿದ ಅಂಚೆ
BY REGISTERED POST

ಫ್ಯಾಕ್ಸ್ : 080 – 2286 3794

ದೂರವಾಣಿ : 080 – 2202 8001

ಕರ್ನಾಟಕ ಸರ್ಕಾರ
ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001

ಸಂಖ್ಯೆ : ವಾಇ : ಸುಮಪ : ವಿಪ್ರಪ : 2014–15 : 18688-733 ಮಾರ್ಚ್ 31 , 2017

ಗೆ,

ಸರ್ಕಾರದ ಕಾರ್ಯದರ್ಶಿಗಳು,
ಅರಣ್ಯ ಇಲಾಖೆ, ಕೊಠಡಿ–442 2ನೇ ಬ್ಲಾಕ್.

ವಿಷಯ: ತಮ್ಮ ಇಲಾಖೆ ವತಿಯಿಂದ ಹೊರಡಿಸುವ ಎಲ್ಲಾ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಬಗ್ಗೆ.
ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಕಸಂವಾ 16 ವಾಪ್ರಜಾ 2017 ದಿನಾಂಕ 28-3-2017

***********

ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ ಮಂಡಳಗಳು, ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ನೀಡುವ ಎಲ್ಲಾ ಪ್ರಮುಖ ಜಾಹೀರಾತುಗಳಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿರುವ ಹಿನ್ನೆಲೆಯಲ್ಲಿ ತಮ್ಮ ಇಲಾಖೆ ವತಿಯಿಂದ ಹೊರಡಿಸುವ ಎಲ್ಲಾ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಸಂದರ್ಭಕ್ಕೆ ಅನುಗುಣವಾಗಿ ಪ್ರಕಟಿಸುವ ಮೂಲಕ ಸಾರ್ವಜನಿಕರಲ್ಲಿ ಮೂಲಭೂತ ಕರ್ತವ್ಯಗಳ ಕುರಿತು ಅರಿವನ್ನು ಮೂಡಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಸುತ್ತೋಲೆಯನ್ನು ಹೊರಡಿಸಿದ್ದಾರೆ.

ಆದ್ದರಿಂದ ಈ ಪತ್ರದೊಂದಿಗೆ ಸರ್ಕಾರದ ಸುತ್ತೋಲೆಯನ್ನು ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದ್ದು, ಇನ್ನು ಮುಂದೆ ತಮ್ಮ ಇಲಾಖೆ ವತಿಯಿಂದ ಹೊರಡಿಸುವ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವಂತೆ ಮತ್ತು ಈ ಕುರಿತು ತಮ್ಮ ಇಲಾಖೆ ವ್ಯಾಪ್ತಿಗೆ ಒಳಪಡುವ ನಿಗಮ ಮಂಡಳಗಳು, ಅಧೀನ ಕಚೇರಿಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಗಮನಕ್ಕೆ ತರುವಂತೆ ಕೋರಲಾಗಿದೆ.

ತಮ್ಮ ವಿಶ್ವಾಸಿ,

(ಎನ್.ಆರ್.ವಿಶುಕುಮಾರ್)
ನಿರ್ದೇಶಕರು

ಗೆ.

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು/ ಸರ್ಕಾರದ ಎಲ್ಲಾ ಇಲಾಖೆಗಳ ಮುಖ್ಯಸ್ಥರು.

ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾ 16 ವಾಪ್ರಜಾ 2017

ಕರ್ನಾಟಕ ಸರ್ಕಾರದ ಸಚಿವಾಲಯ.
ವಿಕಾಸ ಸೌಧ.
ಬೆಂಗಳೂರು, ದಿನಾಂಕ: 28.3.2017.

ಸುತ್ತೋಲೆ

ವಿಷಯ: ಸರ್ಕಾರದ ಎಲ್ಲಾ ಇಲಾಖೆಗಳ ವತಿಯಿಂದ ಹೊರಡಿಸುವ ಎಲ್ಲಾ ಜಾಹೀರಾತಿನಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಬಗ್ಗೆ.

***

ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ ಮಂಡಳಗಳು, ಕಾರ್ಪೋರೇಷನ್, ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ನೀಡುವ ಎಲ್ಲಾ ಪ್ರಮುಖ ಜಾಹೀರಾತುಗಳಲ್ಲಿ ಮೂಲಭೂತ ಕರ್ತವ್ಯಗಳನ್ನು ಪ್ರಕಟಿಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿರುವ ಹಿನ್ನೆಲೆಯಲ್ಲಿ ಇನ್ನು ಮುಂದೆ ತಮ್ಮ ಎಲ್ಲಾ ಇಲಾಖೆಗಳು, ನಿಗಮ ಮಂಡಳಗಳು, ಕಾರ್ಪೋರೇಷನ್, ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಬಿಡುಗಡೆ ಮಾಡುವ ಎಲ್ಲಾ ಪ್ರಮುಖ ಜಾಹೀರಾತುಗಳಲ್ಲಿ ಸಂವಿಧಾನದ ಅನುಚ್ಛೇದ 51 ಎ ರಲ್ಲಿ (Article 51 A of Constitution of India) ತಿಳಿಸಿರುವ "ಮೂಲಭೂತ ಕರ್ತವ್ಯ" (Fundamental duties) ದಪ್ಪ ಅಕ್ಷರಗಳಲ್ಲಿ ತಪ್ಪದೇ ಪ್ರಕಟಿಸುವ ಮೂಲಕ ಸಾರ್ವಜನಿಕರಲ್ಲಿ ಮೂಲಭೂತ ಕರ್ತವ್ಯಗಳ ಕುರಿತು ಅರಿವನ್ನು ಮೂಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಮೂಲಭೂತ ಕರ್ತವ್ಯಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದ್ದು, ಅವುಗಳನ್ನು ಸಂದರ್ಭಕ್ಕನುಗುಣವಾಗಿ ಜಾಹೀರಾತುಗಳಲ್ಲಿ ಸೇರಿಸಿ ಪ್ರಕಟಿಸಲು ಸೂಚಿಸಿದೆ.

ಎಸ್. ಚಿ. ಖುಂಟಿಯಾ
28/3/17

(ಸುಭಾಷ್ ಚಂದ್ರ ಖುಂಟಿಆ)
ಸರ್ಕಾರದ ಮುಖ್ಯ ಕಾರ್ಯದರ್ಶಿಗಳು

ಗೆ,

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು/ ಸರ್ಕಾರದ ಎಲ್ಲಾ ಇಲಾಖೆಗಳ ಮುಖ್ಯಸ್ಥರು/. ನಿಗಮ ಮಂಡಳಗಳು, ಕಾರ್ಪೋರೇಷನ್, ಸ್ಥಳೀಯ ಸಂಸ್ಥೆಗಳು / ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು.

- ಸಂವಿಧಾನವನ್ನು ಪಾಲಿಸುವುದು, ಅದರ ಆಶಯಗಳನ್ನು ಗೌರವಿಸುವುದು, ರಾಷ್ಟ್ರ ಧ್ವಜ ಮತ್ತು ರಾಷ್ಟ್ರ ಗೀತೆಯನ್ನು ಗೌರವಿಸುವುದು.
- ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿ ಕೊಟ್ಟವರ ಆದರ್ಶಗಳನ್ನು ಗೌರವಿಸುವುದು ಮತ್ತು ಪಾಲಿಸುವುದು.
- ಭಾರತದ ಸಾರ್ವಭೌಮತ್ವ, ಅಖಂಡತೆ ಮತ್ತು ಏಕತೆಯನ್ನು ಎತ್ತಿ ಹಿಡಿಯುವುದು ಮತ್ತು ಕಾಪಾಡುವುದು.
- ದೇಶವನ್ನು ರಕ್ಷಿಸುವುದು ಮತ್ತು ದೇಶಸೇವೆಗೆ ಸಿದ್ಧರಿರುವುದು.
- ವಿವಿಧ ಧರ್ಮ ಭಾಷೆ ಮತ್ತು ಪ್ರಾಂತ್ಯಗಳ ಜನರೊಂದಿಗೆ ಸೌಹಾರ್ದದಿಂದ ಇರುವುದು; ಮಹಿಳೆಯರಿಗೆ ಅಗೌರವ ತೋರುವ ಪದ್ಧತಿಗಳನ್ನುತಿರಸ್ಕರಿಸುವುದು.।
- ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು.
- ದೇಶದ ಕಾಡು, ವನ್ಯಜೀವಿ, ನದಿಗಳು ಸೇರಿ ಪರಿಸರ ಉಳಿಸಿ ಬೆಳೆಸುವುದು.
- ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಗ್ಗಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳುವುದು.
- ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿ ಸಾಧಿಸಲು ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು.
- ಸಾರ್ವಜನಿಕ ಆಸ್ತಿ- ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು.
- ಎಲ್ಲಾ ತಂದೆ-ತಾಯಿಯರು, ಪಾಲಕರು, ಪೋಷಕರು 6 ರಿಂದ 14 ವರ್ಷ ವಯಸ್ಸಿನವರಿಗೆ ಶಿಕ್ಷಣ ಪಡೆಯುವ ಹಕ್ಕು ನೀಡುವುದು.